# Bangalore
# Regional News
# 10.09.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ಕೂಡಲೇ ರದ್ದುಪಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
2. ಕೊಪ್ಪಳದಲ್ಲಿ ಎರಡು ಸಾವಿರದ ೩೪೫ ಕೋಟಿ ರೂಪಾಯಿ ವೆಚ್ಚದಲ್ಲಿ ಉಕ್ಕು ಘಟಕ ಸ್ಥಾಪನೆ - ಸಚಿವ ಎಂ.ಬಿ. ಪಾಟೀಲ್
3. ರಾಜ್ಯದಲ್ಲಿ ಅಕ್ರಮ ಗಣಿ ಆಸ್ತಿ ಜಪ್ತಿ ಕಾನೂನಿಗೆ ಅಧಿಕೃತ ಮುದ್ರೆ
4. ನಾಳೆ ಬೆಂಗಳೂರಿನಲ್ಲಿ ಕಾಮನ್‌ವೆಲ್ತ್ ಸಂಸದೀಯ ಸಂಘದ ಸಮ್ಮೇಳನ; ಲೋಕಸಭಾಧ್ಯಕ್ಷ ಓಂ ಬಿರ್ಲಾ ಉದ್ಘಾಟನೆ
5. ಮದ್ದೂರಿನಲ್ಲಿ ೧ಲಕ್ಕೂ ಹೆಚ್ಚು ಗಣಪತಿಗಳ ಸಾಮೂಹಿಕ ವಿಸರ್ಜನೆ; ನ್ಯಾಯಾಂಗ ತನಿಖೆಗೆ ಬಿಜೆಪಿ ಆಗ್ರಹ

<><><><>

ರಾಜ್ಯದಲ್ಲಿ ಅನರ್ಹ ಬಿಪಿಎಲ್ ಕಾರ್ಡ್ ಗಳನ್ನು ರದ್ದುಪಡಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಅರ್ಹ ಬಿಪಿಎಲ್ ಕಾರ್ಡುದಾರರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅರ್ಹರು ಯಾರಾದರೂ ಬಿಟ್ಟು ಹೋಗಿದ್ದರೆ ಅವರಿಗೆ ಬಿಪಿಎಲ್ ಕಾರ್ಡ್ ನೀಡಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ. ಈಗಾಗಲೇ ಗುರುತಿಸಲಾಗಿರುವ ಅನರ್ಹ ಬಿಪಿಎಲ್ ಪಡಿತರ ಚೀಟಿದಾರರ ಪೈಕಿ ೩ ಲಕ್ಷದ ೭೫ ಸಾವಿರದ ೭೧೪ ಪಡಿತರ ಚೀಟಿಗಳನ್ನು ರದ್ದು ಇಲ್ಲವೇ ಬದಲಾವಣೆ ಮಾಡಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಅಕ್ಕಿಯ ಜೊತೆಗೆ ಪೌಷ್ಟಿಕ ಧಾನ್ಯ, ಅಗತ್ಯ ಆಹಾರ ಸಾಮಾಗ್ರಿಗಳನ್ನು ಒಳಗೊಂಡ ಕಿಟ್ ಒದಗಿಸುವ ಕುರಿತು ಪರಿಶೀಲನೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯದವರಿಗೆ ಹೊಸ ನ್ಯಾಯ ಬೆಲೆ ಅಂಗಡಿಗಳನ್ನು ಆದ್ಯತೆ ಮೇಲೆ ನೀಡಲು ಕ್ರಮ ಕೈಗೊಳ್ಳಬೇಕು. ಆಹಾರ ಧಾನ್ಯಗಳನ್ನು ಸರಬರಾಜು ಮಾಡುತ್ತಿರುವ ವಾಹನಗಳಿಗೆ ಜಿಪಿಎಸ್ ಟ್ರ್ಯಾಕರ್‌ಗಳನ್ನು ಅಳವಡಿಸಬೇಕು. ರಾಜ್ಯದಲ್ಲಿರುವ ಎಲ್ಲಾ ಗೋದಾಮುಗಳಲ್ಲಿ ಸಿಸಿಟಿವಿ ಅಳವಡಿಸಲು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಲ್ಲಿ ಖಾಲಿಯಿರುವ ಅಗತ್ಯ ಸಿಬ್ಬಂದಿಗಳ ನೇಮಕಾತಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

<><><>

ಬಜಾಜ್ ಗ್ರೂಪ್ ಜೊತೆಗಿನ ಸಹಭಾಗಿತ್ವದ ಮುಕಂದ ಸುಮಿ ಕಂಪನಿ ಮೂಲಕ ಕೊಪ್ಪಳದಲ್ಲಿನ ಉಕ್ಕು ತಯಾರಿಕಾ ಘಟಕದಲ್ಲಿ ೨ ಸಾವಿರದ ೩೪೫ ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಮಾಡುವುದನ್ನು ಸುಮಿಟೊಮೊ ಖಚಿತಪಡಿಸಿದೆ. ಈ ಕುರಿತು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್  ಮಾಹಿತಿ ನೀಡಿದ್ದು, ಈ ಘಟಕವು ೨೦೨೮ರ ವೇಳೆಗೆ ಕಾರ್ಯಾರಂಭ ಮಾಡಲಿದೆ. ವಾರ್ಷಿಕ ೩ ಲಕ್ಷ ೫೦ ಸಾವಿರ ಟನ್‌ಗಳಷ್ಟು ಕಬ್ಬಿಣ, ಉಕ್ಕು ತಯಾರಿಸುವ ಸಾಮರ್ಥ್ಯ ಹೊಂದಿದೆ ಎಂದು ತಿಳಿಸಿದ್ದಾರೆ. ಪಾಲುದಾರಿಕೆಯಡಿ ಹುಬ್ಬಳ್ಳಿಯಲ್ಲಿರುವ ಪ್ರತಿಷ್ಠಿತ  ನ್ಯೂ ಗವರ್ನಮೆಂಟ್ ಎಲೆಕ್ಟ್ರಿಕಲ್ ಫ್ಯಾಕ್ಟರಿ - ಎನ್‌ಜಿಇಎಫ್ ಕಾರ್ಖಾನೆ ಪುನ:ಶ್ಚೇತನದ  ಸಾಧ್ಯತೆಗಳ ಕುರಿತು ಜಪಾನಿನ ಜೆಎಫ್‌ಇ ಷೋಜಿ ಕಂಪನಿ ಜೊತೆ ಸಚಿವ ಎಂ. ಬಿ. ಪಾಟೀಲ್ ಮಾತುಕತೆ ನಡೆಸಿದ್ದು ಕಾರ್ಖಾನೆಗೆ ಆಹ್ವಾನ ನೀಡಿದ್ದಾರೆ. ಬಂಡವಾಳ ಹೂಡಿಕೆ ಆಕರ್ಷಿಸಲು ಜಪಾನ್‌ಗೆ ಭೇಟಿ ನೀಡಿರುವ ರಾಜ್ಯದ ಉನ್ನತ ಮಟ್ಟದ ನಿಯೋಗದ ನೇತೃತ್ವ ವಹಿಸಿರುವ ಸಚಿವರು, ಕಂಪನಿಯ ಉನ್ನತಾಧಿಕಾರಿಗಳ ಜೊತೆ ನಡೆದ ಸಭೆಯಲ್ಲಿ  ಹುಬ್ಬಳ್ಳಿ ಎನ್‌ಜಿಇಎಫ್ ಪುನಶ್ಚೇತನದ ಪ್ರಸ್ತಾವ ಮುಂದಿಟ್ಟಿದ್ದಾರೆ. ಬ್ಯಾಟರಿ ಚಾಲಿತ ವಿದ್ಯುತ್ ವಾಹನಗಳ (ಬಿಇವಿ) ಮತ್ತು  ವಿದ್ಯುತ್ ಚಾಲಿತ ವಾಹನಗಳ (ಇವಿ) ತಯಾರಿಕೆಯಲ್ಲಿ ಬಳಸಲಾಗುವ ಮೋಟರ್ ಕೋರ್ಸ್ ತಯಾರಿಸುವ  ೪೦೦ ಕೋಟಿ ರೂಪಾಯಿ ವೆಚ್ಚದ ಯೋಜನೆಯು ಶೀಘ್ರದಲ್ಲಿಯೇ ಕಾರ್ಯಗತಗೊಳ್ಳಲಿದೆ ಎಂದು ಕಂಪನಿಯು ರಾಜ್ಯದ ನಿಯೋಗಕ್ಕೆ ಭರವಸೆ ನೀಡಿದೆ. ಜಪಾನ್ ಭೇಟಿಯ ಮೂರನೇ ದಿನ, ರಾಜ್ಯದ ನಿಯೋಗವು  ಸುಮಿಟೊಮೊ, ಯಸ್ಕಾವಾ, ಜೆಎಫ್‌ಇ ಶೋಜಿ ಕಂಪನಿಗಳ  ಉನ್ನತಾಧಿಕಾರಿಗಳ ಜೊತೆಯೂ ಮಾತುಕತೆ ನಡೆಸಿತು.

<><><>

ಕರ್ನಾಟಕ ರಾಜ್ಯ ಅಕ್ರಮ ಗಣಿಗಾರಿಕೆ ಅಧಿನಿಯಮ ಜಾರಿಯಿಂದಾಗಿ ಗಣಿ ಅಕ್ರಮದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಹೊಸ ಕಾನೂನು ಅನುಕೂಲವಾಗಲಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಗದಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ನಿನ್ನೆಯಿಂದ ಕಾನೂನು ಜಾರಿಯಾಗಿದೆ. ಅಕ್ರಮ ಗಣಿ ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕ ಅಧಿನಿಯಮಕ್ಕೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ. ಹೊಸ ಕಾನೂನಿನಿಂದಾಗಿ ಕನ್ನಡಿಗರ ಆಸ್ತಿ ಕನ್ನಡಿಗರಿಗೆ ಮರಳಿ ತರುವ ಕೆಲಸವಾಗಲಿದೆ ಎಂದು  ಹೇಳಿದ್ದಾರೆ.

<><><>

ನಾಳೆ ವಿಧಾನಸೌಧದ ಮುಂಭಾಗದಲ್ಲಿ ನಡೆಯಲಿರುವ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನವನ್ನು ಲೋಕಸಭಾಧ್ಯಕ್ಷರಾದ ಓಂ ಬಿರ್ಲಾ ಉದ್ಘಾಟಿಸಲಿದ್ದಾರೆ. ವಿಧಾನಸೌಧಗಳಲ್ಲಿ ಚರ್ಚೆಗಳು, ಸಂವಾದಗಳು ಜನರ ವಿಶ್ವಾಸವನ್ನು ಬೆಳೆಸುವುದು, ಜನರ ಆಕಾಂಕ್ಷೆಗಳನ್ನು ಪೂರೈಸುವುದು ಈ ಸಮ್ಮೇಳನದ ಕಾರ್ಯಸೂಚಿ ವಿಷಯವಾಗಿದೆ. ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ಉಪಸಭಾಪತಿ ಹರಿವಂಶ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಸಭಾಧ್ಯಕ್ಷರು, ವಿದೇಶಿ ಸಂಸತ್ತುಗಳ ಸದಸ್ಯರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಮೂರು ದಿನಗಳ ಈ ಕಾರ್ಯಕ್ರಮದಲ್ಲಿ ಲೋಕಸಭಾಧ್ಯಕ್ಷರು ಸ್ಮರಣಿಕೆಯನ್ನು ಬಿಡುಗಡೆ ಮಾಡಲಿದ್ದಾರೆ.

<><><>

ಮದ್ದೂರು ನಗರದಲ್ಲಿಂದು ೧ಲಕ್ಕೂ ಹೆಚ್ಚು ಗಣಪತಿಗಳನ್ನು ಸಾಮೂಹಿಕ ವಿಸರ್ಜನೆ ಮಾಡಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷ ನಾಯಕ ಆರ್. ಅಶೋಕ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಈ ನಡುವೆ, ರಾಜ್ಯ ಬಿಜೆಪಿ ನಿಯೋಗ ಮದ್ದೂರು ಪಟ್ಟಣದಲ್ಲಿ ಇಂದು ಮಂಡ್ಯ ಜಿಲ್ಲಾಡಳಿತವನ್ನು ಭೇಟಿ ಮಾಡಿ ಗಣೇಶ ವಿಸರ್ಜನೆ ಹಿಂಸಾಚಾರ ಮತ್ತು ಅದರ ಸುತ್ತಲಿನ ಘಟನೆಗಳ ಬಗ್ಗೆ ಮಾಹಿತಿ ಪಡೆದುಕೊಂಡಿದೆ. ಬಳಿಕ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಘಟನೆ ಕುರಿತಂತೆ ನ್ಯಾಯಾಂಗ ತನಿಖೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತನಾಡಿ, ಇದು ಪೂರ್ವ ನಿಯೋಜಿತ ಕೃತ್ಯ ಎಂದು ಆರೋಪಿಸಿದ್ದಾರೆ.

<><><>

ಹಾವೇರಿ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿ ಹೊಂದಿರುವ ವರದಾ ನದಿ ಹಾಗೂ ಧಾರವಾಡ ಉತ್ತರಕನ್ನಡ ಜಿಲ್ಲೆಗಳಲ್ಲಿ ಹರಿಯುವ ಬೇಡ್ತಿ ನದಿ ಜೋಡಣೆಯ ಹಳೆ ಯೋಜನೆಯಲ್ಲಿ ಮಾರ್ಪಾಡು ಮಾಡಲಾಗಿದೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಗ್ಗೆ ಜನರಿಗೆ ಸಂಪೂರ್ಣ ಮಾಹಿತಿ ಕೊಡುವ ಅಗತ್ಯವಿದೆ ಎಂದು ಹೇಳಿದ್ದಾರೆ. ವರದಾ- ಬೆಡ್ತಿ ನದಿ ಜೋಡಣೆಯಿಂದ ಉತ್ತರ ಕನ್ನಡ ಜಿಲ್ಲೆಯ ಜನತೆಗೆ ಯಾವುದೇ ನಷ್ಟ ಉಂಟಾಗುವುದಿಲ್ಲ. ಯೋಜನೆ ಜಾರಿಯ ಬಗ್ಗೆ ಆ ಭಾಗದ ರಾಜಕೀಯ ಮುಖಂಡರು, ಮಠಾಧೀಶರು ಹಾಗೂ ಜನರ ಜೊತೆಗೆ ಚರ್ಚೆ ನಡಿಸಿ ಅವರ ಮನವೊಲಿಸಬೇಕಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಕೇಂದ್ರ ಸರ್ಕಾರ ಜಿಎಸ್‌ಟಿ ತೆರಿಗೆಯನ್ನು ಇಳಿಸಿರುವುದರಿಂದ ಜನಸಾಮಾನ್ಯರ ಜೇಬಿನ ಭಾರ ಇಳಿಯಲಿದೆ ಎಂದು ಹಿರಿಯ ಆರ್ಥಿಕ ತಜ್ಞ ರಂಗಸ್ವಾಮಿ ಮೂಕನಹಳ್ಳಿ ಅಭಿಪ್ರಾಯಪಟ್ಟಿದ್ದಾರೆ. ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿರುವ ಅವರು, ಇದರಿಂದ ತೆರಿಗೆ ಸೋರಿಕೆ ಕಡಿಮೆಯಾಗಲಿದೆ. ಸರ್ಕಾರಗಳಿಗೆ ಯಾವುದೇ ನಷ್ಟ ಉಂಟಾಗುವುದಿಲ್ಲ ಎಂದು ಅಭಿಪ್ರಾಯಪಟ್ಟಿರುವ ಅವರು, ವ್ಯಾಪಾರ ವಹಿವಾಟು ಹೆಚ್ಚಾಗಲಿದೆ ಎಂದು ಹೇಳಿದ್ದಾರೆ.

ಜಿಎಸ್ ಟಿ ಪರಿಷ್ಕರಣೆ ಮತ್ತು ಸುಧಾರಣೆ ಕುರಿತಂತೆ ನಾಳೆ ಮಧ್ಯಾಹ್ನ ೧.೩೦ಕ್ಕೆ ಆಕಾಶವಾಣಿ ಹಾಗೂ ಎಫ್‌ಎಂ ವಾಹಿನಿಯಲ್ಲಿ ವಿಶೇಷ ಕಾರ್ಯಕ್ರಮ ಮೂಡಿ ಬರಲಿದೆ. ಹಿರಿಯ ಪತ್ರಕರ್ತರಾದ ವಿ. ನಂಜುಂಡಪ್ಪ ಹಿರಿಯ ತೆರಿಗೆ ತಜ್ಞರಾದ ವಿಜಯ್ ರಾಜೇಶ್ ಅವರೊಂದಿಗೆ ಸಂವಾದ ನಡೆಸಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>